ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1617
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ
ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು
ಉತ್ತರಿಸುವ ದಿನಾಂಕ : 11.03.2022

ಕ್ರ ಸಂ.	ಪ್ರಶ್ನೆ	ಉತ್ತರ
ಅ.	ನಗರ ಮತ್ತು ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಬಸ್ ಪಾಸ್ ವಿತರಿಸುವಲ್ಲಿ ಅನುಸರಿಸಲಾಗುತ್ತಿರುವ ಮಾನದಂಡಗಳೇನು;	ಕ.ರಾ.ರ.ಸಾ.ನಿಗಮ, ವಾ.ಕ.ರ.ಸಾ.ಸಂಸ್ಥೆ ಮತ್ತು ಕ.ಕ.ರ.ಸಾ.ನಿಗಮಗಳಲ್ಲಿ ನಗರ/ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಬಸ್ ಪಾಸ್ ವಿತರಣೆಯಲ್ಲಿ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸುತ್ತಿದೆ: 1. ವಿದ್ಯಾರ್ಥಿಗಳು ಸೇವಾಸಿಂಧು ಪೋರ್ಟಲ್‌ನ (ಆನ್‌ಲೈನ್) ಮೂಲಕ ಅರ್ಜಿ ಸಲ್ಲಿಸಿ, ಬಸ್‌ಪಾಸ್‌ಗಳನ್ನು ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ. 2. ವಿದ್ಯಾರ್ಥಿಯು ಕರ್ನಾಟಕ ಸರ್ಕಾರ / ಭಾರತ ಸರ್ಕಾರದಿಂದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳು/ ವಿಶ್ವವಿದ್ಯಾನಿಲಯಗಳ ಪೂರ್ಣಾವಧಿ ಕೋರ್ಸ್‌ಗಳಲ್ಲಿ ಅಭ್ಯಸಿಸುತ್ತಿರಬೇಕು. 3. ವಿದ್ಯಾರ್ಥಿಗಳು ವಾಸಸ್ಥಳದಿಂದ ವಿದ್ಯಾಸಂಸ್ಥೆವರೆಗೆ ಪ್ರಯಾಣಿಸಲು, ಗರಿಷ್ಠ ಪ್ರಯಾಣ ಮಿತಿ 60ಕಿ.ಮೀವರೆಗೆ ಮಾತ್ರ ಬಸ್ ಪಾಸ್ ವಿತರಿಸಲಾಗುತ್ತಿದೆ. 4. 7ನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಉಚಿತ ಪಾಸು ವಿತರಿಸಲಾಗುತ್ತಿದೆ. 5. 2017-18ನೇ ಸಾಲಿನಿಂದ ಸರ್ಕಾರದ ಆದೇಶದನ್ವಯ ಎಲ್ಲಾ ತರಗತಿಗಳ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೂ ಸಹ ಉಚಿತ ಬಸ್ ಪಾಸ್ ವಿತರಣೆ ಮಾಡಲಾಗುತ್ತಿದೆ. 6. ಉಚಿತ ವಿದ್ಯಾರ್ಥಿ ಬಸ್ ಪಾಸ್‌ದಾರರು ನಿಗದಿತ ಸಂಸ್ಕರಣಾ ಶುಲ್ಕ ಮತ್ತು ಅಪಘಾತ ಪರಿಹಾರ ನಿಧಿ ಶುಲ್ಕವನ್ನು ಮಾತ್ರ (ಪ್ರಸ್ತುತ ರೂ.150/-)

ಪಾವತಿಸಬೇಕಿರುತ್ತದೆ.

7. ರಿಯಾಯಿತಿ ಬಸ್‌ಪಾಸ್‌ದಾರರು ನಿಗದಿತ ಪಾಸಿನ ಶುಲ್ಕ, ಸಂಸ್ಕರಣಾ ಶುಲ್ಕ ಹಾಗೂ ಅಪಘಾತ ಪರಿಹಾರ ನಿಧಿ ಶುಲ್ಕವನ್ನು ಪಾವತಿಸಬೇಕಿರುತ್ತದೆ.

ನಿಗಮಗಳ ಬಸ್ಸುಗಳ ಆಚರಣೆ ಇರುವ ಮಾರ್ಗಗಳಲ್ಲಿ ಬಸ್ ಪಾಸ್‌ಗಳನ್ನು ವಿತರಿಸಲಾಗುತ್ತಿದೆ.

ಬೆಂ.ಮ.ಸಾ.ಸಂಸ್ಥೆ:

1. ವಿದ್ಯಾರ್ಥಿಯು ಶಿಕ್ಷಣ ಇಲಾಖೆಯ ನಿಯಂತ್ರಣದಲ್ಲಿರುವ ಶಾಲೆಗಳು, ವಿಶ್ವವಿದ್ಯಾನಿಲಯಗಳ ನಿಯಂತ್ರಣದಲ್ಲಿರುವ ಕಾಲೇಜುಗಳು, ಸರ್ಕಾರಿ/ ಸರ್ಕಾರದಿಂದ ಮಾನ್ಯತೆ ಪಡೆದು ನಡೆಸಲ್ಪಡುವ ಐಟಿಐ ಕಾಲೇಜುಗಳು, ತಾಂತ್ರಿಕ ಶಿಕ್ಷಣ ಇಲಾಖೆಯಿಂದ ಮಾನ್ಯತೆ ಪಡೆದಿರುವ ಶಿಕ್ಷಣ ಸಂಸ್ಥೆಗಳು ಹಾಗೂ ಭಾರತ ಸರ್ಕಾರದಿಂದ ನಡೆಸಲ್ಪಡುವ ಶೈಕ್ಷಣಿಕ ಸಂಸ್ಥೆಗಳ ಪೂರ್ಣಾವಧಿ ಕೋರ್ಸುಗಳಲ್ಲಿ ಅಭ್ಯಸಿಸುತ್ತಿರಬೇಕು.
2. ವಿದ್ಯಾರ್ಥಿಗಳು ಗರಿಷ್ಠ ಪ್ರಯಾಣ ಮಿತಿ 60 ಕಿ.ಮೀ.ವರೆಗೆ ವಾಸಸ್ಥಳದಿಂದ ವಿದ್ಯಾಸಂಸ್ಥೆವರೆಗೆ ಪ್ರಯಾಣಿಸಲು ಬಸ್ ಪಾಸ್ ವಿತರಿಸಲಾಗುತ್ತಿದೆ.
3. ವಿದ್ಯಾರ್ಥಿಗಳು ಪಾಸಿಗಾಗಿ ಸೇವಾಸಿಂಧು ಪೋರ್ಟಲ್ ಮೂಲಕ ಅಥವಾ ಸಂಸ್ಥೆಯ ವೆಬ್‌ಸೈಟ್ www.mybmtc.karnataka.gov.in ನಲ್ಲಿ ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡಿ ಪ್ರಸ್ತುತ ಸಾಲಿನ ಶಾಲಾ/ ಕಾಲೇಜಿನ ಶುಲ್ಕ ರಸೀದಿ ಮತ್ತು ಭಾವಚಿತ್ರವನ್ನು ಅಪ್‌ಲೋಡ್ ಮಾಡಿ ಸಲ್ಲಿಸುವುದು.
4. ವಿದ್ಯಾರ್ಥಿಗಳು ಸಲ್ಲಿಸಿದ ಅರ್ಜಿಗಳನ್ನು (ರಾಜ್ಯ ಪಠ್ಯಕ್ರಮ ಅಭ್ಯಸಿಸುವ ವಿದ್ಯಾರ್ಥಿಗಳನ್ನು ಹೊರತುಪಡಿಸಿ) ಶಾಲಾ/ಕಾಲೇಜು ನೋಡಲ್

		ಅಧಿಕಾರಿಗಳು ಪರಿಶೀಲಿಸಿ ಆನ್‌ಲೈನ್ ಮೂಲಕವೇ ಅನುಮೋದನೆಯನ್ನು ನೀಡುವುದು. ಈ ರೀತಿ ಶಾಲಾ/ ಕಾಲೇಜಿನ ನೋಡಲ್ ಅಧಿಕಾರಿಗಳು ಅನುಮೋದಿಸಿದ ನಂತರ, ಸದರಿ ಅರ್ಜಿಯನ್ನು ಬೆಂ.ಮ.ಸಾ.ಸಂಸ್ಥೆಯಿಂದ ಪರಿಶೀಲಿಸಿ ಆನ್‌ಲೈನ್ ಮೂಲಕವೇ ಅನುಮೋದಿಸಲಾಗುವುದು. 5. ರಾಜ್ಯ ಪಠ್ಯಕ್ರಮ ಅಭ್ಯಸಿಸುವ ವಿದ್ಯಾರ್ಥಿಗಳಿಗಾಗಿ ನಿಗಧಿತ ಅರ್ಜಿಯನ್ನು ನೀಡಿದ್ದು, ಸದರಿ ಅರ್ಜಿಗಳನ್ನು ವಿದ್ಯಾರ್ಥಿಗಳು ಭರ್ತಿ ಮಾಡಿ, ಶಾಲೆಯ ಮುಖ್ಯಸ್ಥರಿಂದ ದೃಢೀಕರಿಸಿ, ನಂತರ ಸ್ಕ್ಯಾನ್ ಮಾಡಿ ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡುವುದು. ಸದರಿ ವಿದ್ಯಾರ್ಥಿಗಳ ಅರ್ಜಿಯನ್ನು ಬೆಂ.ಮ.ಸಾ.ಸಂಸ್ಥೆಯಿಂದ ಪರಿಶೀಲಿಸಿ ಅನುಮೋದಿಸಲಾಗುವುದು. 6. ಈ ರೀತಿ ಅನುಮೋದನೆ ದೊರೆತ ನಂತರ ವಿದ್ಯಾರ್ಥಿಗಳು ಪಾಸ್ ಪಡೆಯುವ ಸ್ಥಳ, ದಿನಾಂಕ & ಸಮಯವನ್ನು ನಿಗಧಿಪಡಿಸಿಕೊಂಡು, ಅದರಂತೆ ಬೆಂಗಳೂರು ಒನ್ ಕೇಂದ್ರಗಳಲ್ಲಿ ಪಾಸಿನ ಮೊತ್ತ ಮತ್ತು ಸೇವಾ ಶುಲ್ಕವನ್ನು ಪಾವತಿಸಿ ವಿದ್ಯಾರ್ಥಿ ಪಾಸನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. 7. ಸಂಸ್ಥೆಯು ಕಾರ್ಯಾಚರಣೆ ಮಾಡುವ ಮಾರ್ಗಗಳಿಗೆ ಮಾತ್ರ ಬಸ್ ಪಾಸುಗಳನ್ನು ವಿತರಿಸಲಾಗುವುದು.
ಆ.	ವಿದ್ಯಾರ್ಥಿಗಳು ಬಸ್ ಪಾಸ್ ತೆಗೆದುಕೊಳ್ಳುವಲ್ಲಿ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ರಾಜ್ಯ ನಾಲ್ಕೂ ಸಾರಿಗೆ ನಿಗಮಗಳಲ್ಲಿ ವಿದ್ಯಾರ್ಥಿ ಬಸ್ ಪಾಸ್‌ಗಳನ್ನು 2019-20ನೇ ಸಾಲಿನಿಂದ ಸೇವಾಸಿಂಧು ಯೋಜನೆಯಡಿ ವಿತರಿಸಲಾಗುತ್ತಿದ್ದು, ಕೌಂಟರ್‌ಗಳಲ್ಲಿ ಪಾಸ್ ವಿತರಣೆ ಸಂಬಂಧ ಪ್ರಸಕ್ತ ಸಾಲಿನಲ್ಲಿ ಯಾವುದೇ ತೊಂದರೆಗಳಾಗುತ್ತಿರುವುದಿಲ್ಲ.
ಇ.	ಹಾಗಿದ್ದಲ್ಲಿ, ಇದನ್ನು ತಪ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;	

ಈ.	ಎಲ್ಲಾ ವಿದ್ಯಾರ್ಥಿಗಳಿಗೂ ಉಚಿತ ಬಸ್ ಪಾಸ್ ನೀಡಲು ಸರ್ಕಾರ ಚಿಂತಿಸಿದೆಯೇ;	ಎಲ್ಲಾ ವಿದ್ಯಾರ್ಥಿಗಳಿಗೂ ಉಚಿತ ಬಸ್ ಪಾಸ್ ನೀಡುವ ಪ್ರಸ್ತಾವನೆ ಪರಿಶೀಲನೆಯಲ್ಲಿರುವುದಿಲ್ಲ.
ಉ.	ಯಾವ ಕಾಲಮಿತಿಯಲ್ಲಿ ಸದರಿ ಯೋಜನೆ ಜಾರಿಗೊಳಿಸಲಾಗುವುದು?	

ಸಂಖ್ಯೆ: ಟಿಡಿ 77 ಟಿಸಿಕ್ಯೂ 2022

(ಬಿ.ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು